**Akashvani : Bangalore**
**Regional Bulletin In Kannada**
**29.01.2026 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**29.01.2026 / 18.40 hrs**
*******************

ಮುಖ್ಯಾಂಶಗಳು

೧. ರಾಜ್ಯ ಸರ್ಕಾರಿ ನೌಕರರು ಪ್ರತಿ ತಿಂಗಳ ಮೊದಲ ಶನಿವಾರ ಖಾದಿ ಬಟ್ಟೆ ಧರಿಸುವುದು ಕಡ್ಡಾಯ - ಸರ್ಕಾರ ಮಹತ್ವದ ಆದೇಶ

೨. ಮನ್ರೇಗಾ ಕುರಿತು ಸರ್ಕಾರದಿಂದ ಜಾಹಿರಾತು; ವಿಧಾನಸಭೆಯಲ್ಲಿ ಪ್ರತಿಪಕ್ಷ ಸದಸ್ಯರಿಂದ ಸಭಾತ್ಯಾಗ

೩. ಮೇಲ್ಮನೆಯಲ್ಲಿ ಆಕ್ಷೇಪಾರ್ಹ ಪದ ಬಳಕೆ; ಆಡಳಿತ ಪ್ರತಿಪಕ್ಷಗಳಿಂದ ಸಭಾತ್ಯಾಗ, ಕಲಾಪ ನಾಳೆಗೆ ಮುಂದೂಡಿಕೆ

೪. ಸಚಿವ ಸ್ಥಾನಕ್ಕೆ ರಾಜೀನಾಮೆ ವದಂತಿ - ಮಾಧ್ಯಮಗಳ ಊಹಾಪೋಹ ತಳ್ಳಿಹಾಕಿದ ಇಂಧನ ಸಚಿವ ಕೆ.ಜೆ. ಜಾರ್ಜ್

೫. ಪ್ರಧಾನಿ ಭೇಟಿ ಮಾಡಿದ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ; ರಾಜ್ಯದ ಅಭಿವೃದ್ಧಿ ಯೋಜನೆಗಳ ಕುರಿತಂತೆ ಚರ್ಚೆ

***************

ಖಾದಿ ಉತ್ಪನ್ನಗಳನ್ನು ಉತ್ತೇಜಿಸುವ ಉದ್ದೇಶದಿಂದ ರಾಜ್ಯ ಸರ್ಕಾರಿ ನೌಕರರು ಪ್ರತಿ ತಿಂಗಳ ಮೊದಲ ಶನಿವಾರ ಖಾದಿ ಬಟ್ಟೆ ಧರಿಸುವುದನ್ನು ಕಡ್ಡಾಯಗೊಳಿಸಲಾಗಿದೆ.

ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ನೇತೃತ್ವದಲ್ಲಿಂದು ನಡೆದ ಸಭೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. ಈ ಯೋಜನೆ ಏಪ್ರಿಲ್ ೨೪ ರಿಂದ ಜಾರಿಗೆ ಬರಲಿದೆ. ಸಭೆಯಲ್ಲಿ ಪ್ರತಿ ತಿಂಗಳ ಶನಿವಾರದಂದು ಎಲ್ಲಾ ಅಧಿಕರಿ ನೌಕರರು ಖಾದಿ ಬಟ್ಟೆಗಳನ್ನು ಧರಿಸಿ, ಕರ್ತವ್ಯ ನಿರ್ವಹಿಸುವುದು, ಸರ್ಕಾರಿ ಸ್ವಾಮ್ಯದ ಖಾದಿ ಗ್ರಾಮೋದ್ಯೋಗ ಮಂಡಳಿಯ ಮಳಿಗೆಗಳಲ್ಲಿ ಖಾದಿ ಬಟ್ಟೆಗಳನ್ನು ಖರೀದಿಸುವುದು, ಖಾದಿ ಗ್ರಾಮೋದ್ಯೋಗ ಮಂಡಳಿ ಸರ್ಕಾರಿ ನೌಕರರಿಗೆ ಶೇಕಡ ೫ರಷ್ಟು ಹೆಚ್ಚುವರಿ ರಿಯಾಯಿತಿ ನೀಡುವುದು ಸೇರಿದಂತೆ ಹಲವು ಮಹತ್ವದ ನಿರ್ಧಾರಗಳನ್ನು ಕೈಗೊಳ್ಳಲಾಗಿದೆ.

***************

ಗ್ರಾಮೀಣ ಮತ್ತು ಪಂಚಾಯತ್ ರಾಜ್ ಇಲಾಖೆ ಮಹಾತ್ಮಾಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಸಂಬಂಧ ದಿನಪತ್ರಿಕೆಗಳಿಗೆ ಜಾಹಿರಾತು ನೀಡವ ಮೂಲಕ ಸಾರ್ವಜನಿಕ ತೆರಿಗೆ ಹಣ ಅಪವ್ಯಯ ಮಾಡುವುದನ್ನು ಖಂಡಿಸಿ ವಿಧಾನಸಭೆಯಲ್ಲಿಂದು ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಸಭಾತ್ಯಾಗ ನಡೆಸಿದರು.

ಬಿಜೆಪಿ ಸದಸ್ಯ ಸುರೇಶ್ ಕುಮಾರ್ ವಿಷಯ ಪ್ರಸ್ತಾಪಿಸಿ, ಇದು ಒಕ್ಕೂಟ ವ್ಯವಸ್ಥೆಯ ನಿಯಮಕ್ಕೆ ವಿರೋಧ ಎಂದು ಹೇಳಿದರು. ಇವರಿಗೆ ಬೆಂಬಲ ವ್ಯಕ್ತಪಡಿಸಿದ ಪ್ರತಿಪಕ್ಷ ಸದಸ್ಯರು, ಜಾಹಿರಾತು ಪ್ರದರ್ಶಿಸಿ, ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ, ಜಾಹಿರಾತು ನೀಡಿರುವುದನ್ನು ಸಮರ್ಥಿಸಿಕೊಂಡರು.

ಗಾಂಧೀಜಿ ಅವರ ಆಶಯಗಳನ್ನು ಜಾಹಿರಾತುಗಳಲ್ಲಿ ಪ್ರಕಟಿಸಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಹೇಳಿದರು. ಈ ವೇಳೆ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಮಾತಿನ ಚಕಮಕಿ ನಡೆದು, ಗೊಂದಲದ ವಾತಾವರಣ ಉಂಟಾಯಿತು. ಜಾಹಿರಾತು ಖಂಡಿಸಿ, ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಸಭಾತ್ಯಾಗ ನಡೆಸಿದರು.

***************

೨೦೨೩ ಜುಲೈಯಿಂದ ೨೦೨೪-೨೫ ರವರೆಗೆ ಅನ್ನಭಾಗ್ಯ ಯೋಜನೆಯ ಫಲಾನುಭವಿಗಳಿಗೆ ರಾಜ್ಯ ಸರ್ಕಾರ ಐದು ಕೆಜಿ ಅಕ್ಕಿ ಬದಲು ೧೭೦ ರೂಪಾಯಿ ಹಣವನ್ನು ಖಾತೆಗೆ ಜಮೆ ಮಾಡುತ್ತಿತ್ತು. ಈಗ ಹಣದ ಬದಲು ಅಕ್ಕಿ ನೀಡಲಾಗುತ್ತಿದೆ ಎಂದು ಆಹಾರ ಸಚಿವ ಕೆ.ಹೆಚ್ ಮುನಿಯಪ್ಪ ವಿಧಾನಸಭೆಯಲ್ಲಿ ತಿಳಿಸಿದ್ದಾರೆ.

ಶಾಸಕ ಮಹೇಶ್ ಟೆಂಗಿನಕಾಯಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕಳೆದ ವರ್ಷ ಜನವರಿ ತಿಂಗಳಲ್ಲಿ ಅಕ್ಕಿ ನೀಡದೆ ಇರಲು ಕೇಂದ್ರವೇ ಕಾರಣ ಎಂದು ಹೇಳಿದ್ದಾರೆ.

ಕೇಂದ್ರ ಸರ್ಕಾರ ಅಕ್ಕಿ ದಾಸ್ತಾನು ಇದ್ದರೂ ನೀಡಿರಲಿಲ್ಲ, ಹೀಗಾಗಿ ಫಲಾನುಭವಿಗಳಿಗೆ ೫ ಕೆಜಿ ಅಕ್ಕಿ ಬದಲು ೧೭೦ ರೂಪಾಯಿ ಹಣ ನೀಡಲಾಗುತ್ತಿತ್ತು ಎಂದು ಸ್ಪಷ್ಟಪಡಿಸಿದ್ದಾರೆ.

***************

ಮೇಲ್ಮನೆಯಲ್ಲಿಂದು ಕಾಂಗ್ರೆಸ್ ಸದಸ್ಯ ಬಿ.ಕೆ. ಹರಿಪ್ರಸಾದ್ ಅವರು, ಬಳಕೆಗೆ ಅರ್ಹವಲ್ಲದ ಪದಗಳನ್ನು ಬಳಸಿದ್ದು, ಸದನದಲ್ಲಿ ಕೋಲಾಹಲಕ್ಕೆ ಕಾರಣವಾಯಿತು.

ಈ ಹಿನ್ನೆಲೆಯಲ್ಲಿ ಮಧ್ಯಾಹ್ನ ಸದನ ಸೇರಿದಾಗ ಸಭಾಪತಿ ಬಸವರಾಜ ಹೊರಟ್ಟಿ, ಪರಿಷತ್ತಿನ ನಿಯಮಾವಳಿಗಳಲ್ಲಿ ಇಂತಹ ಪದಗಳಿಗೆ ಅವಕಾಶ ಇಲ್ಲ, ಹೀಗಾಗಿ ಕಡತಕ್ಕೆ ಹೋಗಬಾರದು, ಈ ಕುರಿತಂತೆ ಹರಿಪ್ರಸಾದ್ ಅವರು, ಮಾತನಾಡಲಿ ಎಂದು ಸೂಚಿಸಿದರು.

ರಾಜ್ಯಪಾಲರಿಗೆ ಅಗೌರವವಾಗಿ ಮಾತನಾಡಿಲ್ಲ. ನನ್ನ ಮಾತುಗಳಿಂದ ಯಾರಿಗಾದರೂ ನೋವಾಗಿದ್ದರೆ ಪದ ವಾಪಸ್ಸು ಪಡೆಯುತ್ತೇನೆ ಎಂದು ಹರಿಪ್ರಸಾದ್ ತಿಳಿಸಿದರು.

ಬಳಿಕ ಸಭಾಪತಿ ಬಸವರಾಜ ಹೊರಟ್ಟಿ ಅವರು, ಪ್ರತಿಪಕ್ಷ ಹಾಗೂ ಆಡಳಿತ ಪಕ್ಷದ ಸದಸ್ಯರು ನೀಡಿರುವ ಆಕ್ಷೇಪಾರ್ಹ ಪದಗಳನ್ನು ಕಡತದಿಂದ ತೆಗೆದು ಹಾಕಲಾಗುವುದು ಎಂದು ರೂಲಿಂಗ್ ನೀಡಿದರು. ಬಳಿಕ ಎಲ್ಲಾ ಸದಸ್ಯರು ಗೌರವದಿಂದ ಇರಿ ಎಂದು ಸಲಹೆ ನೀಡಿದ ಸಭಾಪತಿ, ನಾಳೆಗೆ ಸದನವನ್ನು ಮುಂದೂಡಿದರು.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ತಮ್ಮ ನಡುವಿನ ಸಂಬಂಧ ಉತ್ತಮವಾಗಿದ್ದು, ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ವಿಧಾನಸಭೆಯಲ್ಲಿ ಸ್ಪಷ್ಟಪಡಿಸಿದ್ದಾರೆ.

ಮುಖ್ಯಮಂತ್ರಿ ಪುತ್ರ, ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಹಸ್ತಕ್ಷೇಪದಿಂದಾಗಿ ಸಚಿವ ಜಾರ್ಜ್ ರಾಜೀನಾಮೆ ನೀಡಿದ್ದಾರೆ ಎಂಬ ವದಂತಿಗಳಿಗೆ ಅವರು ಈ ಸ್ಪಷ್ಟನೆ ನೀಡಿದ್ದಾರೆ.

ಮುಖ್ಯಮಂತ್ರಿ ಅವರ ಮೇಲೆ ನನಗೆ ಸಂಪೂರ್ಣ ನಂಬಿಕೆ ಇದ್ದು, ನಿನ್ನೆ ಕಾಂಗ್ರೆಸ್ ಪಕ್ಷದ ಶಾಸಕಾಂಗ ಸಭೆಯಲ್ಲಿ ಭಾಗವಹಿಸಿದ್ದೆ. ಮಾಧ್ಯಮಗಳು ಊಹಿಸಿದಂತೆ ನಾನು ರಾಜೀನಾಮೆ ನೀಡಿಲ್ಲ. ಆ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಪುನರುಚ್ಚರಿಸಿದ್ದಾರೆ.

***************

ಪ್ರಧಾನಿ ನರೇಂದ್ರ ಮೋದಿ ಅವರನ್ನು ಇಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು ಸಂಸತ್ ಭವನದ ಕಚೇರಿಯಲ್ಲಿ ಭೇಟಿಮಾಡಿ, ಮಾತುಕತೆ ನಡೆಸಿದರು. ಈ ವೇಳೆ ಉಭಯ ನಾಯಕರು ರಾಜ್ಯದ ಅಭಿವೃದ್ಧಿ ಯೋಜನೆಗಳ ಕುರಿತಂತೆ ಚರ್ಚೆ ನಡೆಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡಿರುವ ಮಾಜಿ ಪ್ರಧಾನಿ ದೇವೇಗೌಡ, ತಮ್ಮೊಂದಿಗೆ ಪ್ರಧಾನಿ ಅವರು ಸಮಯ ಹಂಚಿಕೊಂಡಿದ್ದಕ್ಕೆ ಧನ್ಯವಾದ ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು, ಸಾಮಾಜಿಕ ಜಾಲತಾಣದಲ್ಲಿ ಕನ್ನಡದಲ್ಲಿ ಪೋಸ್ಟ್ ಮಾಡಿ, ದೇವೇಗೌಡ ಅವರೊಂದಿಗೆ ಅತ್ಯುತ್ತಮ ಸಭೆ ನಡೆಸಲಾಯಿತು. ದೇಶದ ಅಭಿವೃದ್ಧಿಯ ಬಗ್ಗೆ ಅವರ ಉತ್ಸಾಹ ಪ್ರಶಂಸನೀಯ ಎಂದು ಶ್ಲಾಘಿಸಿದ್ದಾರೆ.

***************

ಮೈಸೂರಿನಿಂದ ಕೊಡಗು ಜಿಲ್ಲೆಯ ಕುಶಾಲನಗರದವರೆಗಿನ ಉದ್ದೇಶಿತ ರೈಲು ಸಂಪರ್ಕ ಯೋಜನೆ ನೆನೆಗುದಿಗೆ ಬಿದ್ದಿಲ್ಲ. ಈ ಯೋಜನೆಗೆ ಹಿನ್ನಡೆಯಾಗಲು ರಾಜ್ಯ ಸರ್ಕಾರದ ವಿಳಂಬ ನೀತಿಯೇ ಕಾರಣವಾಗಿದೆ ಎಂದು ಮೈಸೂರು ಕೊಡಗು ಸಂಸದ ಯದುವೀರ್ ಒಡೆಯರ್ ತಿಳಿಸಿದ್ದಾರೆ.

ಮಡಿಕೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಯದುವೀರ್ ಒಡೆಯರ್, ರೈಲು ಮಾರ್ಗದ ಈ ಯೋಜನೆ ಸಾಗುವ ಪ್ರದೇಶಗಳಲ್ಲಿ ರಾಜ್ಯ ಸರ್ಕಾರ ಭೂ ಸ್ವಾದೀನ ಪ್ರಕ್ರಿಯೆ ಕೈಗೊಳ್ಳಬೇಕಾಗಿತ್ತು. ಆದರೆ ಸಾಕಷ್ಟು ಮನವಿ ಬಳಿಕವೂ ಭೂಸ್ವಾಧೀನ ಕೈಗೊಳ್ಳದೇ ವಿಳಂಬ ನೀತಿ ಅನುಸರಿಸಿದೆ. ಹೀಗಾಗಿ ರೈಲು ಸಂಪರ್ಕ ಯೋಜನೆ ವಿಳಂಬವಾಗಿದೆ ಎಂದು ಹೇಳಿದ್ದಾರೆ.

***************

ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯ ಹನ್ನೆರಡನೇ ದಿನವೂ ಮುಂದುವರಿದಿತ್ತು.

ಲಕ್ಕುಂಡಿ ಗ್ರಾಮದ ಶ್ರೀ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಮುಂಭಾಗದಲ್ಲಿ ನಾಲ್ಕು ಬ್ಲಾಕ್ ಗಳಲ್ಲಿ ಉತ್ಖನನ ಕಾರ್ಯ ನಡೆಯುತ್ತಿದೆ. ಇಲ್ಲಿಯವರೆಗೆ ಸುಮಾರು ಹತ್ತು ಅಡಿಗಳ ಆಳದಲ್ಲಿ ಉತ್ಖನನ ಕಾರ್ಯ ನಡೆಸಲಾಗಿದೆ.

ಉತ್ಖನನ ಕಾರ್ಯದಲ್ಲಿ ಇಂದು ಅಡಿಕೆ ಗಾತ್ರದ ಸಣ್ಣ ಕಲ್ಲಿನ ಹರಳು ಮತ್ತು ನಾಗ ಶಿಲ್ಪ ಹೊಂದಿದ ಶಿಲೆ ಪತ್ತೆಯಾಗಿದೆ.

***************

ಬೇಸಿಗೆಯಲ್ಲಿ ಕುಡಿಯುವ ನೀರು ಪೂರೈಕೆಗೆ ಯಾವುದೇ ರೀತಿ ಸಮಸ್ಯೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲಾ ಗ್ರಾಮ ಹಾಗೂ ನಗರ ಸ್ಥಳೀಯ ವಾರ್ಡುಗಳಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರು ಪೂರೈಕೆಗೆ ಯಾವುದೇ ಅಡಚಣೆಯಾಗದಂತೆ ತಕ್ಷಣವೇ ಯೋಜನೆ ರೂಪಿಸಬೇಕು. ಲಭ್ಯವಿರುವ ನೀರಿನ ಮೂಲಗಳನ್ನು ಗುರುತಿಸಿ ಅಗತ್ಯ ಸಂದರ್ಭದಲ್ಲಿ ನೀರು ಪೂರೈಕೆ ಆಗುವಂತೆ ಗಮನಹರಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

ಅವಶ್ಯಕತೆ ಇದ್ದಲ್ಲಿ ಮಾತ್ರ ನೀರು ಒದಗಿಸಲು ಟ್ಯಾಂಕರ್‌ಗಳನ್ನು ಬಳಸಿಕೊಳ್ಳುವಂತೆ ಜಿಲ್ಲಾಧಿಕಾರಿ ತಿಳಿಸಿದ್ದಾರೆ.

***************

ಸರ್ಕಾರಿ ನೌಕರರು ಒತ್ತಡದಿಂದ ಹೊರಬಂದು ಜಿಲ್ಲಾ ಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆ ಅನಾವರಣ ಮಾಡುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಟರಾಜು ಗಾಣಕಲ್ ತಿಳಿಸಿದ್ದಾರೆ.

ರಾಮನಗರದಲ್ಲಿಂದು ಕರ್ನಾಟಕ ರಾಜ್ಯ ನೌಕರರ ಸಂಘದ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಉದ್ಘಾಟಿಸಿ ಮಾತನಾಡಿದ ಅವರು, ಕ್ರೀಡಾಕೂಟಗಳು ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗಿಯಾದರೆ ಒತ್ತಡ ಕಡಿಮೆಯಾಗಿ ಉತ್ಸಾಹ ಹೆಚ್ಚುತ್ತದೆ, ಇದರಿಂದ ಸರ್ಕಾರಿ ನೌಕರರು ಮತ್ತಷ್ಟು ಹುರುಪಿನಿಂದ ಕೆಲಸ ಮಾಡಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

***************

ದಾವಣಗೆರೆ ವಿಶ್ವ ವಿದ್ಯಾಲಯದ ೧೩ನೇ ವಾರ್ಷಿಕ ಘಟಿಕೋತ್ಸವ ಸಮಾರಂಭ ನಾಳೆ ವಿಶ್ವ ವಿದ್ಯಾಲಯದ ಆವರಣ ಶಿವಗಂಗೋತ್ರಿಯಲ್ಲಿ ನಡೆಯಲಿದೆ ಎಂದು ಕುಲಪತಿ ಪ್ರೊ.ಬಿ.ಡಿ.ಕುಂಬಾರ ಮಾಹಿತಿ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಘಟಿಕೋತ್ಸವ ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಉನ್ನತ ಶಿಕ್ಷಣ ಸಚಿವ ಡಾ. ಎಂಸಿ ಸುಧಾಕರ್. ಕೇಂದ್ರ ರಕ್ಷಣಾ ಸಚಿವರ ಮಾಜಿ ವೈಜ್ಞಾನಿಕ ಸಲಹೆಗಾರ ಡಾ.ವಾಸುದೇವ್ ಕೆ.ಅತ್ರೆ, ಭಾಗವಹಿಸಲಿದ್ದಾರೆ.

ಘಟಿಕೋತ್ಸವದಲ್ಲಿ ೭೦ ಜನರಿಗೆ ಪಿಎಚ್‌ಡಿ ೪೫ ವಿದ್ಯಾರ್ಥಿಗಳಿಗೆ ೮೭ ಚಿನ್ನದ ಪದಕ ಪ್ರದಾನ ಮಾಡಲಾಗುತ್ತಿದೆ.

***************

ವಿಶ್ವ ಕ್ಯಾನ್ಸರ್ ದಿನದ ಹಿನ್ನೆಲೆಯಲ್ಲಿ ಜಠರ ಕರುಳಿನ ಕ್ಯಾನ್ಸರ್ ಕುರಿತಾದ ೨ ದಿನಗಳ ಶೈಕ್ಷಣಿಕ ಸಮ್ಮೇಳನ ‘ಕೆಎಂಸಿ ಕ್ಯಾನ್ಸರ್ ಕಾನ್ ಕ್ಲೇವ್’ ಇದೇ ೩೧ ಹಾಗೂ ಫೆಬ್ರುವರಿ ೧ರಂದು ಮಂಗಳೂರಿನ ಅತ್ತಾವರದ ಕೆಎಂಸಿಯಲ್ಲಿ ನಡೆಯಲಿದೆ ಎಂದು ಸಮ್ಮೇಳನ ಸಂಘಟನಾ ಸಮಿತಿ ಅಧ್ಯಕ್ಷ ಡಾ.ಎಂ.ಎಸ್.ಅತಿಯಾಮಾನ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಪ್ರಖ್ಯಾತ ಮೆಡಿಕಲ್, ರೇಡಿಯೇಶನ್ ಹಾಗೂ ಸರ್ಜಿಕಲ್ ಕ್ಯಾನ್ಸರ್ ತಜ್ಞರು, ಗ್ಯಾಸ್ಟ್ರೋ ಎಂಟರಾಲಜಿಸ್ಟ್‌ಗಳು, ಪೆಥಾಲಿಸ್ಟ್ ಗಳು, ರೇಡಿಯಾಲಜಿಸ್ಟ್‌ಗಳು ಹಾಗೂ ಇತರ ಪ್ರಮುಖರು ಭಾಗವಹಿಸಲಿದ್ದಾರೆ. ಉಪನ್ಯಾಸಗಳು, ಪ್ಯಾನಲ್ ಚರ್ಚೆಗಳು ಹಾಗೂ ಪ್ರಕರಣ ಆಧಾರಿತ ಸಂವಾದ ನಡೆಯಲಿದೆ ಎಂದು ಹೇಳಿದ್ದಾರೆ.

ವಿಶ್ವ ಕ್ಯಾನ್ಸರ್ ದಿನದ ಹಿನ್ನೆಲೆಯಲ್ಲಿ ಫೆಬ್ರುವರಿ ೧ರಂದು ಬೆಳಗ್ಗೆ ೬ ಗಂಟೆಗೆ ‘ಮಂಗಳೂರು ಕ್ಯಾನ್ ವಾಕ್’ ಜಾಗೃತಿ ನಡಿಗೆ ಆಯೋಜಿಸಲಾಗಿದೆ.

*******ಮುಕ್ತಾಯ*******